# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ತಳವಾರ ಸಾಬಣ್ಣಾ ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ;

**ಪ್ರಶ್ನೆ:**

ಸನ್ಮಾನ್ಯ ಸಭಾಪತಿಗಳೇ, ಬೆಂಗಳೂರು ವಿಶ್ವವಿದ್ಯಾಲಯ ರಾಜ್ಯದ ದೊಡ್ಡ ವಿಶ್ವವಿದ್ಯಾಲಯವಾಗಿತ್ತು. 'ಬೆಂಗಳೂರು ವಿಶ್ವವಿದ್ಯಾಲಯ ತ್ರಿವಿಭಜನೆ ಬಳಿಕ ನಡೆದಿಲ್ಲ ಹುದ್ದೆ ಭರ್ತಿ' ಎಂದು ವಿಜಯವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿದೆ. ಈ ವಿಶ್ವವಿದ್ಯಾಲಯದಿಂದ ವಿಭಜನೆಯಾದ ಬೆಂಗಳೂರು ನಗರ ಮತ್ತು ಬೆಂಗಳೂರು ಉತ್ತರ ವಿಶ್ವವಿದ್ಯಾಲಯಗಳು ಕಾರ್ಯಾರಂಭ ಮಾಡಿ 06 ವರ್ಷಗಳು ಕಳೆದಿದೆ. ಇಲ್ಲಿಯವರೆಗೂ ಪೂರ್ಣ ಪ್ರಮಾಣದ ಬೋಧಕ/ಬೋಧಕೇತರ ಸಿಬ್ಬಂದಿ ನೇಮಿಸದ ಪರಿಣಾಮ ವಿಶ್ವವಿದ್ಯಾಲಯ ಅನುದಾನ ಆಯೋಗದ (ಯುಜಿಸಿ) 12ಬಿ ಮಾನ್ಯತೆಯಿಂದ ವಂಚಿತವಾಗಿವೆ. ನಿಯಮದ ಪ್ರಕಾರ ಪ್ರತಿ ವಿಭಾಗದಲ್ಲಿ ಒಬ್ಬ ಪ್ರಾಧ್ಯಾಪಕ, ತಲಾ ಇಬ್ಬರು ಸಹ ಪ್ರಾಧ್ಯಾಪಕ ಮತ್ತು 3 ಸಹಾಯಕ ಪ್ರಾಧ್ಯಾಪಕರು ಇರಬೇಕು. ಆದರೆ, ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ಯಾವುದೇ ವಿಭಾಗಕ್ಕೂ ಖಾಯಂ ವಿಭಾಗ ಮುಖ್ಯಸ್ಥರಿಲ್ಲ. ಇದರಿಂದ ಸರ್ಕಾರ ಮತ್ತು ಯುಜಿಸಿಯಿಂದ ವಿಶ್ವವಿದ್ಯಾಲಯಗಳಿಗೆ ಬರಬೇಕಾದ ಅನುದಾನಗಳು ಮತ್ತು ಸೌಲಭ್ಯಗಳಿಗೆ ತೊಂದರೆಯಾಗಿದೆ. ಬೆಂಗಳೂರು ನಗರ ವಿಶ್ವವಿದ್ಯಾಲಯ 161 ಬೋಧಕ ಮತ್ತು 123 ಬೋಧಕೇತರ ಸಿಬ್ಬಂದಿ ಆವಶ್ಯಕತೆ ಇದ್ದು, ಈಗ ಕ್ರಮವಾಗಿ 14 ಬೋಧಕ ಮತ್ತು 08 ಬೋಧಕೇತರ ಸಿಬ್ಬಂದಿ ಇದ್ದಾರೆ. ಉಳಿದ ಸಿಬ್ಬಂದಿಗಳು ಹೊರಗುತ್ತಿಗೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಸ್ವಂತ ಕಟ್ಟಡ, ಗ್ರಂಥಾಲಯ, ಕ್ರೀಡಾ ವಿಭಾಗ, ಎನ್‌ಎಸ್‌ಎಸ್, ಎನ್‌ಸಿಸಿ ಅಲ್ಲಿಯೂ ಖಾಯಂ ಸಿಬ್ಬಂದಿ ಬೇಕಾಗುತ್ತದೆ. ಯುಜಿಸಿ 12ಬಿ ಮಾನ್ಯತೆ ಪಡೆಯಲು ಶೇ.75 ಖಾಯಂ ಸಿಬ್ಬಂದಿ ನೇಮಕವಾಗಬೇಕು. 12ಬಿ ಮಾನ್ಯತೆಯಿಂದ ಸಂಶೋಧನೆ, ಶೈಕ್ಷಣಿಕ, ಆಡಳಿತ ಸಂಬಂಧಿತ ವಿಷಯಗಳಿಗೆ ವಿಶೇಷ ಅನುದಾನ ದೊರೆಯಲಿದೆ. ಅಲ್ಲದೆ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾಲೇಜುಗಳಿಗೂ ಯುಜಿಸಿ ಮತ್ತು ರೂಸಾ ಅನುದಾನ ಪಡೆಯಲು ಸಮಸ್ಯೆಯಾಗುತ್ತಿದೆ. ಈ ಹಿನ್ನಲೆಯಲ್ಲಿ, ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಿ, ವಿಶ್ವವಿದ್ಯಾಲಯಕ್ಕೆ 12ಬಿ ಮಾನ್ಯತೆ ದೊರಕಿಸಿಕೊಡಲು ಸಹಕರಿಸಬೇಕೆಂದು ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರನ್ನು ಈ ಮೂಲಕ ಒತ್ತಾಯಿಸುತ್ತೇನೆ.

**ಉತ್ತರ:**

ಮಾತೃ ವಿಶ್ವವಿದ್ಯಾಲಯವಾದ ಬೆಂಗಳೂರು ವಿಶ್ವವಿದ್ಯಾಲಯವನ್ನು ಸರ್ಕಾರದ ಆದೇಶ ಸಂಖ್ಯೆ: ಇಡಿ 167 ಯುಬಿವಿ 2017, ದಿನಾಂಕ: 29.06.2017ರಲ್ಲಿ ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕಾ, ಕೋಲಾರ ಹಾಗೂ ಬೆಂಗಳೂರು ವಿಶ್ವವಿದ್ಯಾಲಯವೆಂದು ವಿಭಜಿಸಲಾಗಿರುತ್ತದೆ. ಬೆಂಗಳೂರು ನಗರ ವಿಶ್ವವಿದ್ಯಾಲಯವು ದಿನಾಂಕ: 01.07.2017 ರಿಂದ ಕಾರ್ಯಾರಂಭ ಮಾಡಿರುತ್ತದೆ.

ಮೇಲ್ಕಂಡ ಆದೇಶದನ್ವಯ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ 18 ಬೋಧಕರು ಮತ್ತು 17 ಬೋಧಕೇತರ ಸಿಬ್ಬಂದಿಗಳನ್ನು ಅಭಿಮತ ಆಯ್ಕೆ ಮೂಲಕ ಹಂಚಿಕೆ ಮಾಡಲಾಗಿರುತ್ತದೆ. ಈ ಪೈಕಿ 07 ಬೋಧಕರು ವಯೋನಿವೃತ್ತಿ ಹೊಂದಿರುತ್ತಾರೆ. ಅಂತರ ವಿಶ್ವವಿದ್ಯಾಲಯದ ವರ್ಗಾವಣೆ ಮೂಲಕ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಿಂದ ಒಬ್ಬ ಬೋಧಕರನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ವರ್ಗಾವಣೆ ಮಾಡಲಾಗಿದೆ. ವಿಶ್ವವಿದ್ಯಾಲಯದಲ್ಲಿ ಪ್ರಸಕ್ತ ಒಟ್ಟು 10 ಬೋಧಕ ಸಿಬ್ಬಂದಿಗಳು ಹಾಗೂ 04 ಖಾಯಂ ಬೋಧಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಬೆಂಗಳೂರು ನಗರ

ವಿಶ್ವವಿದ್ಯಾಲಯಕ್ಕೆ ಸರ್ಕಾರದ ಆದೇಶ ಸಂಖ್ಯೆ: ಇಡಿ 493 ಯುಬಿವಿ 2017 (ಭಾಗ-4), ದಿನಾಂಕ: 07.11.2019ರಲ್ಲಿ 161 ಬೋಧಕ ಮತ್ತು 123 ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಸದರಿ ಹುದ್ದೆಗಳ ಪೈಕಿ 59 ಬೋಧಕ ಮತ್ತು 47 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿದ್ದು, ಈ ಮಧ್ಯೆ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 266 ಸೇನೆನಿ 2025, ದಿನಾಂಕ: 10.09.2025 ರಲ್ಲಿ ಒಳಮೀಸಲಾತಿಯನ್ನು ಅಳವಡಿಸಿಕೊಂಡು ನೇರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಸೂಚನೆ ನೀಡಲಾಗಿದ್ದು, ಒಳಮೀಸಲಾತಿ ಕಲ್ಪಿಸುವ ಪ್ರಕ್ರಿಯೆಯ ಹಿನ್ನೆಲೆಯಲ್ಲಿ ಯಾವುದೇ ನೇರ ನೇಮಕಾತಿ ಆಗಿರುವುದಿಲ್ಲ. ಒಳಮೀಸಲಾತಿಯನ್ನು ಅಳವಡಿಸಿಕೊಂಡು ವಿಶ್ವವಿದ್ಯಾಲಯವು ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸಿದ್ದಲ್ಲಿ ಪರಿಶೀಲಿಸಿ ಕ್ರಮವಹಿಸಲಾಗುವುದು.

ಬೆಂಗಳೂರು ನಗರ ವಿಶ್ವವಿದ್ಯಾಲಯದ ಸ್ನಾತಕ ಮತ್ತು ಸ್ನಾತಕೋತ್ತರ ಹಾಗೂ ಮಹಿಳಾ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ 217 ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000, ಸೆಕ್ಷನ್ 56 ಹಾಗೂ ದಿನಾಂಕ:28-01-2019 ರ ಯು.ಜಿ.ಸಿ. ಮಾರ್ಗಸೂಚಿಗಳನ್ನು ಅನುಸರಿಸಿ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲಾಗಿದೆ. ಸದರಿ ವಿಶ್ವವಿದ್ಯಾಲಯದ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಕೆಲವು ತಿದ್ದುಪಡಿಗಳನ್ನು ಮಾಡಲಾಗುತ್ತಿದೆ.

ಹೊಸದಾಗಿ ಸ್ಥಾಪನೆಯಾದ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ಬೋಧಕ ಮತ್ತು ಬೋಧಕೇತರ ಹುದ್ದೆಗಳ ನೇಮಕಾತಿ, ವಿದ್ಯಾರ್ಥಿಗಳ ಪ್ರವೇಶಾತಿ ಮೂಲ ಸೌಲಭ್ಯಗಳು, ಪಿಂಚಣಿ ಉಪದಾನ ಇತ್ಯಾದಿ ವಿಷಯಗಳ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿನ ಸಚಿವ ಸಂಪುಟದ ಉಪಸಮಿತಿಯು ಹಲವು ಸಭೆಗಳನ್ನು ನಡೆಸಿದ್ದು, ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಸಚಿವ ಸಂಪುಟ ಸಭೆಯ ಮುಂದೆ ಮಂಡಿಸಲು ನಿರ್ಣಯಿಸಲಾಗಿದೆ.

*****

ಸಂಖ್ಯೆ: ಇಡಿ/483/ಯುಬಿವಿ/2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು